ಹಿಂದುಳಿದ ವರ್ಗಗಳ ಇಲಾಖೆಯ ವಸತಿ ಶಾಲೆಯ ಬಗ್ಗೆ

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-

14 (81) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಹಾಗೂ ಇತರೆ ಶಾಲೆಗಳು ಯಾವುವು; ಅವುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಹಾಲಿ ಎಷ್ಟು ವಸತಿ ಹಾಗೂ ಇತರೆ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ; ಅಲ್ಲಿ ಕೆಲಸ ನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ನೌಕರರ ಸಂಖ್ಯೆ ಎಷ್ಟು (ಜಿಲ್ಲಾವಾರು, ತಾಲ್ಲೂಕುವಾರು; ಶಾಲಾವಾರು ನೌಕರರ ಹೆಸರು ಹಾಗೂ ಹುದ್ದೆಯ ಪದನಾಮದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಶಾಲೆ ಶಿಕ್ಷಕರುಗಳನ್ನು ಯಾವ ವಿಧಾನದಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ಶಾಲೆಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ನೀಡಲು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ? (ವಿವರವಾದ ಮಾಹಿತಿ ನೀಡುವುದು)